## ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ

**ಸಿ.ಸಿ. ಸಂಖ್ಯೆಃ 992/2022**

**ಪಿರ್ಯಾದಿ** ಃ ಶ್ರೀ ಆರ್.ಕೆ. ಸತೀಶ್ ಚಂದ್ರ ಶಣೈ
ಬಿನ್ ಆರ್.ವಿ.ಕೃಷ್ಣಮೂರ್ತಿ,
ವಯಸ್ಸು ಸುಮಾರು 66 ವರ್ಷ,
ವಾಸಃ ಮಹಾವೀರ ರಸ್ತೆ,
ಕಳಸ ಅಂಚೆ ಮತ್ತು ಹೋಬಳಿ,
ಮೂಡಿಗೆರೆ ತಾಲ್ಲೂಕು.

ವಿರುದ್ಧ

**ಆರೋಪಿ** ಃ ಶ್ರೀ ಎಂ.ಆರ್. ಸುರೇಶ್,
ಬಿನ್ ರಾಮೇಗೌಡ,
ವಯಸ್ಸು ಸುಮಾರು 56 ವರ್ಷ,
ವಾಸಃ ಕಾಚ್ನಕಲ್ಲು ರಸ್ತೆ ಗಂಗನಕೊಡಿಗೆ ಅಂಚೆ,
ಕಳಸ ಹೋಬಳಿ, ಮೂಡಿಗೆರೆ ತಾಲ್ಲೂಕು.

### ಆಪಾದನೆಯ ಸಾರಾಂಶ

ನಾನು ವಿಶ್ವನಾಥ್ ಎ., ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ, ಆರೋಪಿಯಾದ ನಿಮ್ಮ ಮೇಲೆ ಮಾಡುವ ಆಪಾದನೆ ಏನೆಂದರೆಃ–

ಆರೋಪಿಯಾದ ನೀವು ಪಿರ್ಯಾದುದಾರರ ಅಡಿಕೆ ತೋಟದಲ್ಲಿ ರೂ.17,00,000/- ಗಳಿಗೆ ಅಡಿಕೆ ಚೇಣಿಯನ್ನು ಮಾಡಿಕೊಂಡು ರೂ.2,00,000/- ರುಪಾಯಿಯನ್ನು ನಗದಾಗಿ ಪಾವತಿಸಿ, ಇನ್ನುಳಿದ ರೂ.15,00,000/- ಹಣವನ್ನು ಮರುಪಾವತಿ ಮಾಡುವ ಸಲುವಾಗಿ ನಿಮ್ಮ ಖಾತೆ ಹೊಂದಿರುವ ಕೆನರಾ ಬ್ಯಾಂಕ್, ಕಳಸ ಶಾಖೆಯ ಚೆಕ್ ಸಂಖ್ಯೆ:570599, ದಿನಾಂಕ 04.07.2022, ರೂ.15,00,000/- ಎಂದು ನಮೂದಿಸಿ ನೀಡಿದ್ದು, ಸದರಿ ಚೆಕ್ ಅನ್ನು ಫಿರ್ಯಾದಿಯು ಕೆನರಾ ಬ್ಯಾಂಕ್, ಕಳಸ ಶಾಖೆಯಲ್ಲಿ ಜಮೆಗಾಗಿ ಸಲ್ಲಿಸಿದಾಗ, ನಿಮ್ಮ ಖಾತೆಯನ್ನು ಮುಚ್ಚಲಾಗಿದೆ (Account Closed) ಎಂದು ಹಿಂಬರಹ ನೀಡಿದ್ದು ಇರುತ್ತದೆ. ಕಾರಣ, ಫಿರ್ಯಾದಿಯು ದಿನಾಂಕ 13.08.2022 ರಂದು ನೋಟೀಸ್ ಮೂಲಕ ಆರೋಪಿಯಾದ ನಿಮಗೆ ಸದರಿ ವಿಚಾರವನ್ನು ತಿಳಿಸಿದರೂ ಸಹ ನೀವು ಹಣವನ್ನು ವಾಪಸ್ ಮಾಡಿರುವುದಿಲ್ಲ. ಈ ರೀತ್ಯಾ ನೀವು ನೆಗೋಷಿಬಲ್ ಇನ್ಸ್ಟ್ರುಮೆಂಟ್ ಆಕ್ಟ್ ಕಲಂ 138 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಮಾಡಿರುವಿರಿ ಎಂದು ಆಪಾದಿಸಲಾಗಿದೆ?

ಪ್ರಃ 1. ಈಗ ಮೇಲೆ ಓದಿ ಹೇಳಿದ ಆಪಾದನೆಯನ್ನು ಕೇಳಿದ್ದೀರಾ? ಅದು ನಿಮಗೆ ಅರ್ಥವಾಯಿತೇ?

ಆರೋಪಿಯ ಉತ್ತರಃ

ಪ್ರಃ 2. ನೀವು ಆಪಾದನೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ?

ಆರೋಪಿಯ ಉತ್ತರಃ

(ಆರೋಪಿಗೆ ದಿನಾಂಕ 25.01.2023 ರಂದು ಆಪಾದನೆಯ ಸಾರಾಂಶವನ್ನು ಅವರಿಗೆ ತಿಳಿಯುವ ಭಾಷೆಯಲ್ಲಿ ಓದಿ, ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು. ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಎಂದು ಪ್ರಮಾಣೀಕರಿಸುತ್ತೇನೆ)

Sd/-

ಮೂಡಿಗೆರೆ

**ದಿನಾಂಕ:** 25.01.2023

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ, ಮೂಡಿಗೆರೆ.